ಬೀಳಗಿಯಲ್ಲಿ ಸರ್ಕಾರಿ ಪ್ರಥಮ ದರ್ಜೆ ಮಹಾವಿದ್ಯಾಲಯ

467 - ಶ್ರೀ ಜೆ.ಟಿ. ಪಾಟೀಲ (ಬೀಳಗಿ) : ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ಬೀಳಗಿಯಲ್ಲಿ ಸರ್ಕಾರಿ ಪ್ರಥಮ ದರ್ಜೆ ಮಹಾವಿದ್ಯಾಲಯ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?*

ಆ) *ಹಾಗಿದ್ದಲ್ಲಿ ಅಲ್ಲಿ ಬೋಧಕರು ಹಾಗೂ ಬೋಧಕೇತರ ಸಿಬ್ಬಂದಿ ಎಷ್ಟು?*

ಇ) *ಈಗ ಅಲ್ಲಿ ಇರುವ ಉಪನ್ಯಾಸಕರು ಎಷ್ಟು?*

ಈ) *ಸದರಿ ಮಹಾವಿದ್ಯಾಲಯದಲ್ಲಿ ಶಿಕ್ಷಕರ ಕೊರತೆ ಇರುವುದನ್ನು ಇದೇ ತಿಂಗಳಲ್ಲಿ ತುಂಬಲು ಸರ್ಕಾರ ಕ್ರಮ ಕೈಗೊಳ್ಳುವುದೇ?*

ಶ್ರೀ ಡಿ. ಮಂಜುನಾಥ (ಉನ್ನತ ಶಿಕ್ಷಣ ಸಚಿವರು) :

ಅ) ಬಂದಿದೆ.

ಆ) ಬೋಧಕರು - 5
ಬೋಧಕೇತರರು - 3

ಇ) ಉಪನ್ಯಾಸಕರು - 5

ಈ) ಕರ್ನಾಟಕ ಲೋಕಸೇವಾ ಆಯೋಗದಿಂದ ಆಯ್ಕೆಯಾದ ಅಭ್ಯರ್ಥಿಗಳ ಪಟ್ಟಿ ಸ್ವೀಕೃತವಾದ ನಂತರ ಸೂಕ್ತ ಕ್ರಮ ಕೈಗೊಳ್ಳಲಾಗುವುದು.

ಉಪಾಧ್ಯಕ್ಷರು : ಚುಕ್ಕೆ ಗುರುತಿಲ್ಲದ ಪ್ರಶ್ನೆಗಳಿಗೆ ಉತ್ತರಗಳನ್ನು ಸಭೆಯ ಮುಂದೆ ಮಂಡಿಸಲಾಯಿತು. ಈಗ ಸಭೆಯ ಮುಂದಿಡಲಾಗುವ ಕಾಗದ ಪತ್ರಗಳು.

(ಗೊಂದಲ)

ಶ್ರೀ ಎಂ. ಮಲ್ಲಿಕಾರ್ಜುನ ಖರ್ಗೆ:- ಮಾನ್ಯ ಉಪಾಧ್ಯಕ್ಷರೆ, ಗ್ರಾನೈಟ್ ವಿಚಾರದಲ್ಲಿ ಹೇಳುವುದಾದರೆ ನೂರಾರು ಕೋಟಿ ರೂಪಾಯಿಯ ಗ್ರಾನೈಟ್ ಲೂಟಿ ಆಗುತ್ತಿದೆ. ಅದರ ಬಗ್ಗೆ ಈಗಾಗಲೇ ಆ ಸದನದಲ್ಲಿ ಧರಣಿ ನಡೆದಿದೆ. ಅದರ ಬಗ್ಗೆ ಮಂತ್ರಿಗಳು ಏನು ಹೇಳಿಕೆ ಕೊಟ್ಟರು? ಸುಮಾರು ನೂರು ಕೋಟಿ ರೂಪಾಯಿಯ ಗ್ರಾನೈಟನ್ನು ಪೇಕ್ಕ ಪರ್ಮಿಟ್ ತೆಗೆದುಕೊಂಡು ಸಾಗಿಸುತ್ತಿದ್ದಾರೆ. ಅದರ ಬಗ್ಗೆ ಪ್ರಸ್ತಾಪ ಮಾಡಿದ್ದೇವೆ. ತಾವು ಒಬ್ಬೊಬ್ಬರಿಗೆ ಮಾತನಾಡುವುದಕ್ಕೆ ಅವಕಾಶ ಕೊಡಿ.

(ಗೊಂದಲ)

ಉಪಾಧ್ಯಕ್ಷರು : ಸಭೆಯ ಮುಂದಿಡಲಾಗುವ ಕಾಗದ ಪತ್ರಗಳು ಆದ ತಕ್ಷಣ ಕರೆಯುತ್ತೇನೆ.